**ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ,**

**ಮುಳಬಾಗಿಲು.**

**<u>ಸಿ. ಸಿ. ಸಂಖ್ಯೆಃ 1629/2024</u>**

ದಿನಾಂಕಃ 09.04.2026

| | | |
|---|---|---|
| ಹೆಸರುಃ | ನಾಗಪ್ಪ | ಸಿ.ಡಬ್ಲ್ಯೂಃ 02 |
| ತಂದೆಯ ಹೆಸರು | ಚಿನ್ನಪ್ಪ | ಪಿ. ಡಬ್ಲ್ಯೂಃ 02 |
| ವಯಸ್ಸು | 45 ವರ್ಷ | |
| ಕೆಲಸ | ಕೂಲಿ | ಪ್ರಮಾಣ ವಚನ ಬೋಧಿಸಲಾಯಿತು. |
| ವಾಸ | ಮಿಂಡಳ್ಳಿ ಗ್ರಾಮ | |

**<u>ಮುಖ್ಯ ವಿಚಾರಣೆಃ ಮಾನ್ಯ ಎ.ಪಿ.ಪಿ ರವರಿಂದಃ</u>**

ಮೃತ ಚಾಸಾ-1, ಚಾಸಾ-2 ಮತ್ತು 4 ಪಕ್ಕದ ಮನೆಯವರು ಹಾಗೂ ನ್ಯಾಯಾಲಯದ ಮುಂದೆ ಇರುವ ಆರೋಪಿತರು ನಮ್ಮ ಊರಿನವರು.

ಸಾಕ್ಷಿಗೆ 2 ದಾಖಲೆಗಳನ್ನು ತೋರಿಸಲಾಗಿ ಅವುಗಳಲ್ಲಿರುವ ತಮ್ಮ ಸಹಿಗಳನ್ನು ನೋಡಿ ಗುರುತಿಸಿದ್ದು, ಸದರಿ ದಾಖಲೆಗಳು ಸ್ಥಳ ಹಾಗೂ ಅಮಾನತು ಪಂಚನಾಮೆಗಳಾಗಿದ್ದು ಅವುಗಳನ್ನು ನಿಪಿ-2 ಮತ್ತು 3 ಎಂದು ಸಾಕ್ಷಿಯ ಸಹಿಗಳನ್ನು ನಿಪಿ-2(ಎ) ಮತ್ತು 3(ಎ) ಎಂದು ಗುರುತಿಸಲಾಯಿತು.

ಪೋಲಿಸರು ನನ್ನ ಸಮಕ್ಷಮ ಯಾವುದೇ ಮಹಜರು ಕ್ರಮ ಜರುಗಿಸಿಲ್ಲ ಹಾಗೂ ಯಾವುದೇ ದಾಖಲೆಗಳನ್ನು ಹಾಗೂ ಛಾಯಾಚಿತ್ರಗಳನ್ನು ಅಮಾನತ್ತು ಪಡಿಸಿಕೊಂಡಿರುವುದಿಲ್ಲ. ಪ್ರಕರಣದ ಕುರಿತು ನನಗೆ ಯಾವುದೇ ಮಾಹಿತಿ ಇರುವುದಿಲ್ಲ. ಘಟನೇಯನ್ನು ಕಣ್ಣಾರೆ ಕಂಡಿರುವುದಿಲ್ಲ. ಈ ಕುರಿತು ನಾನು ಪೋಲಿಸರಿಗೆ ಯಾವುದೇ ಹೇಳಿಕೆಯನ್ನು ನೀಡಿರುವುದಿಲ್ಲ.

(ಈ ಹಂತದಲ್ಲಿ ಸಹಾಯಕ ಸರ್ಕಾರಿ ಅಭಿಯೋಜಕರು, ಸದರಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ ಪಾಟೀ ಸವಾಲಿಗಾಗಿ ಅನುಮತಿ ಕೋರಿರುತ್ತಾರೆ, ಸಾಕ್ಷಿಯ ಹೇಳಿಕೆ ಹಾಗೂ ದಾಖಲೆಗಳನ್ನು ಪರಿಶೀಲಿಸಿ ಅನುಮತಿ ನೀಡಲಾಯಿತು)

***ಪಾಟೀ ಸವಾಲುಃ ಮಾನ್ಯ ಎ.ಪಿ.ಪಿ ರವರಿಂದಃ***

ಸುಮಾರು 7 ವರ್ಷಗಳ ಹಿಂದೆ ಚಾಸಾ-1 ಮೀನಾಕ್ಷಿಯನ್ನು ಕೋಲಾರ ತಾಲೂಕಿನ ಕಾಜಿಕಳ್ಳಿ ಗ್ರಾಮದ ಪ್ರದೀಪ್ ರವರಿಗೆ ಕೊಟ್ಟು ಮದುವೆ ಮಾಡಲಾಗಿತ್ತು ಎಂದರೆ ಸರಿ. ಅವರಿಗೆ ಇಬ್ಬರೂ ಗಂಡು ಮಕ್ಕಳು ಇದ್ದಾರೆ ಎಂದರೆ ಸರಿ. ತದನಂತರ ವಿನಾಕಾರಣ ಸದರಿ ಪ್ರದೀಪ್ ಮೀನಾಕ್ಷಿಯ ಮೇಲೆ ಜಗಳ ತೆಗೆದು ಮಾನಸಿಕ ಹಾಗೂ ದೈಹಿಕ ಹಿಂಸೆ ನೀಡುತ್ತಿದ್ದನ್ನು ಎಂದರೆ ಸರಿಯಲ್ಲ. ಆದ್ದರಿಂದ ಮೀನಾಕ್ಷಿ ತನ್ನ ಮಕ್ಕಳೊಂದಿಗೆ ತವರು ಮನೆಗೆ ಬಂದು ನೆಲೆಸಿದ್ದಳು ಎಂದರೆ ಸರಿಯಲ್ಲ.

ದಿ. 28.12.2023 ರಂದು ಮದ್ಯಾಹ್ನ 3.00 ಗಂಟೆ ಸಮಯದಲ್ಲಿ ನಾನು ನಮ್ಮ ಮನೆಯ ಹತ್ತಿರ ಇದ್ದಾಗ ಆರೋಪಿತರು ಅಲ್ಲಿಗೆ ಬಂದು ಜಗಳ ತೆಗೆದು ಅವಾಚ್ಯ ಶಬ್ದಗಳಿಂದ ಬೈದು ಕೈ ಕಾಲುಗಳಿಂದ ಹಲ್ಲೆ ಮಾಡಿರುತ್ತಾರೆ ಎಂದರೆ ಸರಿಯಲ್ಲ. ಅದಲ್ಲದೇ ಆರೋಪಿತರು ಮೀನಾಕ್ಷಿಗೆ ಪ್ರಾಣದ ಬೆದರಿಕೆ ಹಾಕಿರುತ್ತಾರೆ ಎಂದರೆ ಸರಿಯಲ್ಲ. ಈ ಬಗ್ಗೆ ನಾನು ಗಲಾಟೆಯನ್ನು ಬಿಡಿಸಿರುತ್ತೇನೆಂದರೆ ಸರಿಯಲ್ಲ.

ದಿ. 01.01.2024 ಹಾಗೂ 15.01.2024 ರಂದು ಪೋಲಿಸರು ನನ್ನ ಹಾಗೂ ಚಾಸಾ-4 ರವರ ಸಮಕ್ಷಮ ಬೆಳಿಗ್ಗೆ 9 ರಿಂದ 10 ಹಾಗೂ 11 ರಿಂದ 12 ಗಂಟೆಯವರೆಗೆ ನಿಪಿ-2 ಮತ್ತು 3 ರಂತೆ ಪಂಚನಾಮೆಗಳನ್ನು ಜರುಗಿಸಿರುತ್ತಾರೆ ಎಂದರೆ ಸರಿಯಲ್ಲ. ಸದರಿ ಪಂಚನಾಮೆಗಳಿಗೆ ನಾನು ಓದಿ ತಿಳಿದುಕೊಂಡು ಸಹಿ ಮಾಡಿರುತ್ತೇನೆಂದರೆ ಸರಿಯಲ್ಲ. ಪೋಲಿಸರು ಸದರಿ ಪಂಚನಾಮೆಗಳ ಕಾಲಕ್ಕೆ ದಾಖಲೆಗಳನ್ನು ಹಾಗೂ ಛಾಯಾಚಿತ್ರಗಳನ್ನು ಅಮಾನತ್ತು ಪಡಿಸಿಕೊಂಡಿರುತ್ತಾರೆ ಎಂದರೆ ಸರಿಯಲ್ಲ.

ದಿ.01.01.2024 ರಂದು ಈಗ ಓದಿ ಹೇಳಿದಂತೆ ಹೇಳಿಕೆ ನೀಡಿದ್ದೆನೆಂದರೆ ಸರಿಯಲ್ಲ. ಸದರಿ ಹೇಳಿಕೆಯ ಭಾಗವನ್ನು ನಿಪಿ-4 ಎಂದು ಗುರುತಿಸಲಾಯಿತು. ಎಲ್ಲಾ ವಿಚಾರ ಗೊತ್ತಿದ್ದರೂ ಕೂಡ ಆರೋಪಿತರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

***ಮರುವಿಚಾರಣೆಃ ಇಲ್ಲ.***

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು)

ಓ ಹೇ ಕೇ ಸರಿ ಇದೆ

(ಗೌಡ ಜಗದೀಶ ರುದ್ರೇ)
ಹಿರಿಯ ಸಿವಿಲ್ ನ್ಯಾಯಾಧೀಶರು
ಮತ್ತು ಜೆಎಂಎಫ್‌ಸಿ ಮುಳಬಾಗಿಲು.

**ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ,**

**ಮುಳಬಾಗಿಲು.**

**ಸಿ. ಸಿ. ಸಂಖ್ಯೆ 1629/2024**

ದಿನಾಂಕಃ 09.04.2026

| | | |
|---|---|---|
| ಹೆಸರುಃ | ರಾಮಪ್ಪ | ಸಿ.ಡಬ್ಲ್ಯೂಃ 04 |
| ತಂದೆಯ ಹೆಸರು | ಹನುಮಪ್ಪ | ಪಿ. ಡಬ್ಲ್ಯೂಃ 03 |
| ವಯಸ್ಸು | 75 ವರ್ಷ | |
| ಕೆಲಸ | ಕೂಲಿ | ಪ್ರಮಾಣ ವಚನ ಬೋಧಿಸಲಾಯಿತು. |
| ವಾಸ | ಮಿಂಡಳ್ಳಿ ಗ್ರಾಮ | |

**ಮುಖ್ಯ ವಿಚಾರಣೆಃ ಮಾನ್ಯ ಎ.ಪಿ.ಪಿ ರವರಿಂದಃ**

ಮೃತ ಚಾಸಾ-1, ಚಾಸಾ-2 ಮತ್ತು 4 ಪಕ್ಕದ ಮನೆಯವರು ಹಾಗೂ ನ್ಯಾಯಾಲಯದ ಮುಂದೆ ಇರುವ ಆರೋಪಿತರು ನಮ್ಮ ಊರಿನವರು.

ಸಾಕ್ಷಿಗೆ 2 ದಾಖಲೆಗಳನ್ನು ತೋರಿಸಲಾಗಿ ಅವುಗಳಲ್ಲಿರುವ ತಮ್ಮ ಸಹಿಗಳನ್ನು ನೋಡಿ ಗುರುತಿಸಿದ್ದು, ಸದರಿ ದಾಖಲೆಗಳು ಸ್ಥಳ ಹಾಗೂ ಅಮಾನತು ಪಂಚನಾಮೆಗಳಾಗಿದ್ದು ಅವುಗಳನ್ನು ಈಗಾಗಲೇ ನಿಪಿ-2 ಮತ್ತು 3 ಎಂದು ಗುರುತಿಸಲಾಗಿದ್ದು, ಸಾಕ್ಷಿಯ ಸಹಿಗಳನ್ನು ನಿಪಿ-2(ಬಿ) ಮತ್ತು 3(ಬಿ) ಎಂದು ಗುರುತಿಸಲಾಯಿತು.

ಪೋಲಿಸರು ನನ್ನ ಸಮಕ್ಷಮ ಯಾವುದೇ ಮಹಜರು ಕ್ರಮ ಜರುಗಿಸಿಲ್ಲ ಹಾಗೂ ಯಾವುದೇ ದಾಖಲೆಗಳನ್ನು ಹಾಗೂ ಛಾಯಾಚಿತ್ರಗಳನ್ನು ಅಮಾನತ್ತು ಪಡಿಸಿಕೊಂಡಿರುವುದಿಲ್ಲ. ಪ್ರಕರಣದ ಕುರಿತು ನನಗೆ ಯಾವುದೇ ಮಾಹಿತಿ ಇರುವುದಿಲ್ಲ. ಘಟನೇಯನ್ನು ಕಣ್ಣಾರೆ ಕಂಡಿರುವುದಿಲ್ಲ.

(ಈ ಹಂತದಲ್ಲಿ ಸಹಾಯಕ ಸರ್ಕಾರಿ ಅಭಿಯೋಜಕರು, ಸದರಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ ಪಾಟೀ ಸವಾಲಿಗಾಗಿ ಅನುಮತಿ ಕೋರಿರುತ್ತಾರೆ, ಸಾಕ್ಷಿಯ ಹೇಳಿಕೆ ಹಾಗೂ ದಾಖಲೆಗಳನ್ನು ಪರಿಶೀಲಿಸಿ ಅನುಮತಿ ನೀಡಲಾಯಿತು)

***ಪಾಟೀ ಸವಾಲುಃ ಮಾನ್ಯ ಎ.ಪಿ.ಪಿ ರವರಿಂದಃ***

ಸುಮಾರು 7 ವರ್ಷಗಳ ಹಿಂದೆ ಚಾಸಾ-1 ಮೀನಾಕ್ಷಿಯನ್ನು ಕೋಲಾರ ತಾಲೂಕಿನ ಕಾಜಿಕಳ್ಳಿ ಗ್ರಾಮದ ಪ್ರದೀಪ್ ರವರಿಗೆ ಕೊಟ್ಟು ಮದುವೆ ಮಾಡಲಾಗಿತ್ತು ಎಂದರೆ ಸರಿ. ಅವರಿಗೆ ಇಬ್ಬರೂ ಗಂಡು ಮಕ್ಕಳು ಇದ್ದಾರೆ ಎಂದರೆ ಸರಿ. ತದನಂತರ ವಿನಾಕಾರಣ ಸದರಿ ಪ್ರದೀಪ್ ಮೀನಾಕ್ಷಿಯ ಮೇಲೆ ಜಗಳ ತೆಗೆದು ಮಾನಸಿಕ ಹಾಗೂ ದೈಹಿಕ ಹಿಂಸೆ ನೀಡುತ್ತಿದ್ದನ್ನು ಎಂದರೆ ಸರಿಯಲ್ಲ. ಆದ್ದರಿಂದ ಮೀನಾಕ್ಷಿ ತನ್ನ ಮಕ್ಕಳೊಂದಿಗೆ ತವರು ಮನೆಗೆ ಬಂದು ನೆಲೆಸಿದ್ದಳು ಎಂದರೆ ಸರಿಯಲ್ಲ.

ದಿ. 28.12.2023 ರಂದು ಮದ್ಯಾಹ್ನ 3.00 ಗಂಟೆ ಸಮಯದಲ್ಲಿ ನಾನು ನಮ್ಮ ಮನೆಯ ಹತ್ತಿರ ಇದ್ದಾಗ ಆರೋಪಿತರು ಅಲ್ಲಿಗೆ ಬಂದು ಜಗಳ ತೆಗೆದು ಅವಾಚ್ಯ ಶಬ್ದಗಳಿಂದ ಬೈದು ಕೈ ಕಾಲುಗಳಿಂದ ಹಲ್ಲೆ ಮಾಡಿರುತ್ತಾರೆ ಎಂದರೆ ಸರಿಯಲ್ಲ. ಅದಲ್ಲದೇ ಆರೋಪಿತರು ಮೀನಾಕ್ಷಿಗೆ ಪ್ರಾಣದ ಬೆದರಿಕೆ ಹಾಕಿರುತ್ತಾರೆ ಎಂದರೆ ಸರಿಯಲ್ಲ. ಈ ಬಗ್ಗೆ ನಾನು ಗಲಾಟೆಯನ್ನು ಬಿಡಿಸಿರುತ್ತೇನೆಂದರೆ ಸರಿಯಲ್ಲ.

ದಿ. 01.01.2024 ಹಾಗೂ 15.01.2024 ರಂದು ಪೋಲಿಸರು ನನ್ನ ಹಾಗೂ ಚಾಸಾ-4 ರವರ ಸಮಕ್ಷಮ ಬೆಳಿಗ್ಗೆ 9 ರಿಂದ 10 ಹಾಗೂ 11 ರಿಂದ 12 ಗಂಟೆಯವರೆಗೆ ನಿಪಿ-2 ಮತ್ತು 3 ರಂತೆ ಪಂಚನಾಮೆಗಳನ್ನು ಜರುಗಿಸಿರುತ್ತಾರೆ ಎಂದರೆ ಸರಿಯಲ್ಲ. ಸದರಿ ಪಂಚನಾಮೆಗಳಿಗೆ ನಾನು ಓದಿ ತಿಳಿದುಕೊಂಡು ಸಹಿ ಮಾಡಿರುತ್ತೇನೆಂದರೆ ಸರಿಯಲ್ಲ. ಪೋಲಿಸರು ಸದರಿ ಪಂಚನಾಮೆಗಳ ಕಾಲಕ್ಕೆ ದಾಖಲೆಗಳನ್ನು ಹಾಗೂ ಛಾಯಾಚಿತ್ರಗಳನ್ನು ಅಮಾನತ್ತು ಪಡಿಸಿಕೊಂಡಿರುತ್ತಾರೆ ಎಂದರೆ ಸರಿಯಲ್ಲ. ಎಲ್ಲಾ ವಿಚಾರ ಗೊತ್ತಿದ್ದರೂ ಕೂಡ ಆರೋಪಿತರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

***ಮರುವಿಚಾರಣೆಃ ಇಲ್ಲ.***

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು)

ಓ ಹೇ ಕೇ ಸರಿ ಇದೆ

(ಗೌಡ ಜಗದೀಶ ರುದ್ರೇ)
ಹಿರಿಯ ಸಿವಿಲ್ ನ್ಯಾಯಾಧೀಶರು
ಮತ್ತು ಜೆಎಂಎಫ್‌ಸಿ ಮುಳಬಾಗಿಲು.